81

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಉಪವಿಭಾಗಧಿಕಾರಿಗಳು ಮತ್ತು ತಾಲ್ಲೂಕಿನ ತಹಶೀಲ್ದಾರ್ ರವರುಗಳು ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ವರದಿ ಸಲ್ಲಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಸಕಇ 228 ಸಮನ್ವಯ 2010, ದಿನಾಂಕ:20-01-2012.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಏಕಕಡತ ಪ್ರಸ್ತಾವನೆ ಸಂಖ್ಯೆ: SWD/EDU/ED4/80/2023, C-1161067.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರಲ್ಲಿ ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಪರಿಶಿಷ್ಟ ವರ್ಗದ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯ/ವಸತಿ ಶಾಲೆಗಳನ್ನು ತಪಾಸಣೆ ಮಾಡಲು ರಾಜ್ಯದ ಆಯಾ ತಾಲ್ಲೂಕಿನ ತಹಸೀಲ್ದಾರರು, ಆಯಾ ಉಪ ವಿಭಾಗದ ಉಪ ವಿಭಾಗಾಧಿಕಾರಿಗಳಿಗೆ ತಮ್ಮ ಭೌಗೋಳಿಕ/ಅಧಿಕಾರ ವ್ಯಾಪ್ತಿಯಲ್ಲಿ ಬರುವ ವಿದ್ಯಾರ್ಥಿನಿಲಯ/ವಸತಿ ಶಾಲೆಗಳ ತಪಾಸಣೆ ನಡೆಸಲು ಮತ್ತು ಹೀಗೆ ತಪಾಸಣೆ ಮಾಡಲಾದ ತಪಾಸಣಾ ವರದಿಗಳನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ ಸಲ್ಲಿಸಲು ಹಾಗೂ ಸಂಬಂಧಪಟ್ಟ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ತಪಾಸಣಾ ವರದಿಯನ್ನು ಪರಿಶೀಲಿಸಿ ತಪ್ಪಿತಸ್ಥ ವಿದ್ಯಾರ್ಥಿನಿಲಯ/ವಸತಿ ಶಾಲೆಗಳ ವಾರ್ಡನ್‌ಗಳ ವಿರುದ್ಧ ನಿಯಮಾನುಸಾರ ಕ್ರಮಕೈಗೊಳ್ಳಲು ಅಧಿಕಾರವನ್ನು ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (2)ರಲ್ಲಿ ದಿನಾಂಕ:16-08-2023 ರಂದು ನಡೆದ ವಿಡಿಯೋ ಸಂವಾದದ ಸಭೆಯಲ್ಲಿ ಚರ್ಚಿಸಿದಂತೆ ಸಮಾಜ ಕಲ್ಯಾಣ ಇಲಾಖೆಯಲ್ಲಿನ ಅವ್ಯವಸ್ಥೆ ಮತ್ತು ವಿದ್ಯಾರ್ಥಿನಿಲಯಗಳಲ್ಲಿನ ಮೂಲಭೂತ ಸೌಲಭ್ಯಗಳ ಕೊರತೆ ಹಾಗೂ ವಿದ್ಯಾರ್ಥಿನಿಲಯಗಳ ಅಸಮರ್ಪಕ ನಿರ್ವಹಣೆ ಬಗ್ಗೆ ಪ್ರತಿ ದಿನ ಮಧ್ಯಮಗಳಲ್ಲಿ ಹಾಗೂ ದಿನ ಪತ್ರಿಕೆಗಳಲ್ಲಿ ವರದಿಗಳು ಪ್ರಕಟವಾಗುತ್ತಿರುವ ಹಿನ್ನಲೆಯಲ್ಲಿ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿನ ಸಮರ್ಪಕ ನಿರ್ವಹಣೆ ಬಗ್ಗೆ ಅಲ್ಲಿನ ಕಂದಾಯ ವಿಭಾಗದ ಉಪವಿಭಾಗಧಿಕಾರಿಗಳು ಹಾಗೂ ತಾಲ್ಲೂಕಿನ ತಹಶೀಲ್ದಾರ್ ರವರು ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಅನಿರೀಕ್ಷಿತವಾಗಿ ಭೇಟಿ ನೀಡಿ ಪ್ರತಿ ಮಾಹೆ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಸೂಚಿಸಲು ಸರ್ಕಾರದ ಆದೇಶ ಸಂಖ್ಯೆ: 228/ಸಮನ್ವಯ/2010, ದಿನಾಂಕ 20.01.2012 ರಲ್ಲಿನ ಮಾರ್ಗಸೂಚಿಗಳನ್ನು ಪರಿಷ್ಕರಿಸುವ ಕುರಿತು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: SWD/EDU/ED4/80/2023, C-1161067, ದಿನಾಂಕ:15-09-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಂತೆ ರಾಜ್ಯದ ಆಯಾ ತಾಲ್ಲೂಕಿನ ತಹಸೀಲ್ದಾರರು, ಆಯಾ ಉಪ ವಿಭಾಗದ ಉಪ ವಿಭಾಗಾಧಿಕಾರಿಗಳಿಗೆ ಭೌಗೋಳಿಕ/ಅಧಿಕಾರ ವ್ಯಾಪ್ತಿಯಲ್ಲಿ ಬರುವ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯ/ವಸತಿ ಶಾಲೆಗಳಿಗೆ ಅನಿರೀಕ್ಷಿತ ಭೇಟಿ/ತಪಾಸಣೆ ನೀಡಿ ಸರ್ಕಾರಕ್ಕೆ ವರದಿ ಮಾಡುವಂತೆ ಆದೇಶಿಸಿದೆ.

**ಮಾರ್ಗಸೂಚಿಗಳು:-**

1. ಉಪವಿಭಾಗಾಧಿಕಾರಿಗಳು ಕಂದಾಯ ಉಪ ವಿಭಾಗ ವ್ಯಾಪ್ತಿಯಲ್ಲಿ ಬರುವ ವಿದ್ಯಾರ್ಥಿ ನಿಲಯಕ್ಕೆ ಪ್ರತಿಮಾಹೆಯಲ್ಲಿ ಕನಿಷ್ಟ 01 ಬಾರಿ ಅನಿರಿಕ್ಷಿತವಾಗಿ ಭೇಟಿ ನೀಡಿ ವರದಿಯನ್ನು ಸರ್ಕಾರಕ್ಕೆ ನೇರವಾಗಿ ಸಲ್ಲಿಸುವುದು.
2. ತಾಲ್ಲೂಕಿನ ತಹಶಿಲ್ದಾರವರು ತಾಲ್ಲೂಕು ವ್ಯಾಪ್ತಿಯಲ್ಲಿನ ವಿದ್ಯಾರ್ಥಿ ನಿಲಯಗಳಿಗೆ ಪ್ರತಿ ಮಾಹೆಯಲ್ಲಿ ಕನಿಷ್ಟ 02 ಬಾರಿ ಅನಿರಿಕ್ಷಿತವಾಗಿ ಭೇಟಿ ನೀಡಿ ವರದಿಯನ್ನು ಉಪವಿಭಾಗಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

15/9

**(ಎಲ್.ನರಸಿಂಹಮೂರ್ತಿ)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

15/9/2023

**ಇವರಿಗೆ:-**

1. ಮಹಾಲೇಖಪಾಲರು, (ಎ & ಇ ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
4. ಎಲ್ಲಾ ಜಿಲ್ಲಾಧಿಕಾರಿಗಳು.

5. ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ .
6. ಎಲ್ಲಾ ಅಪರ/ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
7. ಎಲ್ಲಾ ಉಪವಿಭಾಗಧಿಕಾರಿಗಳು.
8. ಎಲ್ಲಾ ತಾಲ್ಲೂಕಿನ ತಹಶಿಲ್ದಾರವರು.
9. ಕಲ್ಯಾಣ ಕೇಂದ್ರ, 24/7 helpdesk, ಸಮಾಜ ಕಲ್ಯಾಣ ಇಲಾಖೆ, ಯವನಿಕ ಆವರಣ, ನೃಪತುಂಗ ರಸ್ತೆ, ಡಾ|| ಬಿ.ಆರ್ ಅಂಬೇಡ್ಕರ್ ವೀಧಿ, ಬೆಂಗಳೂರು.
10. ಶಾಖಾ ರಕ್ಷಾ, ಕಡತ/ಹೆಚ್ಚುವರಿ ಪ್ರತಿಗಳು.

(ಕ್ರಮ ಸಂಖ್ಯೆ:4 ರಿಂದ 8ರವರಗೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮುಖಾಂತರ)

**ಪ್ರತಿಗಳು:**

1. ಮಾನ್ಯ ಸಮಾಜ ಕಲ್ಯಾಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿ-1, ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.